ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಗುರುವಾರ, ದಿನಾಂಕ : 24 ನೇ ಸೆಪ್ಟೆಂಬರ್, 2020

ವಿವಿಧ ಇಲಾಖೆಗಳಿಗೆ ಬಿಡುಗಡೆ ಮಾಡಲಾದ ಅನುದಾನದ ಬಗ್ಗೆ

ಶ್ರೀ ಸುನೀಲ್‌ಗೌಡ ಬಸನಗೌಡ ಪಾಟೀಲ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

560 (648) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಪ್ರಸಕ್ತ ಸಾಲಿನಲ್ಲಿ ರಾಜ್ಯ ಸರ್ಕಾರವು ವಿವಿಧ ಇಲಾಖೆಗಳಿಗೆ ಬಿಡುಗಡೆ ಮಾಡಿದ ಅನುದಾನ ಎಷ್ಟು;

(ಆ) ಬಿಡುಗಡೆ ಮಾಡಿದ ಅನುದಾನದಲ್ಲಿ ಇದುವರೆಗೆ ಖರ್ಚು ಮಾಡಿದ ಅನುದಾನ ಎಷ್ಟು;

(ಇ) ಯಾವ ಯಾವ ಉದ್ದೇಶಗಳಿಗಾಗಿ ಹಣ ಬಿಡುಗಡೆ ಮಾಡಲಾಗಿದೆ;

(ಈ) ಯಾವ ಯಾವ ಇಲಾಖೆಗಳು ಯಾವ ಯಾವ ಉದ್ದೇಶಕ್ಕಾಗಿ ಎಷ್ಟು ಹಣವನ್ನು ಖರ್ಚು ಮಾಡಿವೆ;

(ಉ) ಬಯಲು ಸೀಮೆ ಅಭಿವೃದ್ಧಿ ಮಂಡಳಿಗೆ 2018-19 ರಿಂದ 2020-21ನೇ ಸಾಲಿನಲ್ಲಿ ಬಿಡುಗಡೆಯಾದ ಅನುದಾನ ಎಷ್ಟು;

(ಊ) ಬಯಲು ಸೀಮೆ ಅಭಿವೃದ್ಧಿ ಮಂಡಳಿಗೆ ಹಣ ಬಿಡುಗಡೆ ಮಾಡದಿರಲು ಕಾರಣವೇನು;

(ಋ) ಬಯಲು ಸೀಮೆ ಅಭಿವೃದ್ಧಿ ಮಂಡಳಿಯಿಂದ ವಿಜಯಪುರ -ಬಾಗಲಕೋಟೆ ಜಿಲ್ಲೆಗಳಿಗೆ ಬಿಡುಗಡೆಯಾದ ಅನುದಾನ ಎಷ್ಟು; (ವಿವರಗಳನ್ನು ನೀಡುವುದು)

(ಎ) ಬಯಲು ಸೀಮೆ ಅಭಿವೃದ್ಧಿ ಮಂಡಳಿಗೆ ಪ್ರಸ್ತುತ ಬಿಡುಗಡೆಯಾಗಬೇಕಿರುವ ಅನುದಾನ ಎಷ್ಟು; ಸದರಿ ಅನುದಾನವನ್ನು ಯಾವ ಕಾಲಮಿತಿಯೊಳಗೆ ಬಿಡುಗಡೆ ಮಾಡಲಾಗುವುದು?